**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಡಿಸಿಇ:ಟಿಆರ್‌ಎನ್:ಟಿಆರ್‌ಎನ್:24:2023:ವ&ನಿ ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:27.07.2023

# ಸುತ್ತೋಲೆ

ವಿಷಯ: 2023ನೇ ಸಾಲಿನ ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ಪ್ರಕ್ರಿಯೆ ಸಂಬಂಧ ಅಂತಿಮ ಆದ್ಯತಾ ಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಸಮ ಸಂಖ್ಯೆಯ ದಿನಾಂಕ:05.07.2023ರ ಅಧಿಸೂಚನೆ.
2. ಈ ಕಛೇರಿ ಸಮಸಂಖ್ಯೆಯ ಸುತ್ತೋಲೆ ದಿ:17.07.2023.
3. ಈ ಕಛೇರಿ ಸಮ ಸಂಖ್ಯೆಯ ದಿನಾಂಕ:21.07.2023 ಮತ್ತು 24.07.2023 ರಂತೆ ಪ್ರಕಟಿಸಲಾದ ತಾತ್ಕಾಲಿಕ ಆದ್ಯತಾ ಪಟ್ಟಿ.

*****

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ಸಹಾಯಕ ಪಾಧ್ಯಾಪಕರು, ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ನಿರ್ದೇಶಕರು) ವರ್ಗಾವಣೆಗಳನ್ನು ನಿಯಂತ್ರಿಸುವ ಸಲುವಾಗಿ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ಅನ್ನು ರೂಪಿಸಿ ಅಧಿಸೂಚಿಸಲಾಗಿರುತ್ತದೆ.

ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಮಗಳಲ್ಲಿನ ಅವಕಾಶಗಳನ್ವಯ ಉಲ್ಲೇಖ (1)ರಂತೆ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಗೆ ಅರ್ಜಿಗಳನ್ನು ಹಾಗೂ ಸಾರ್ವಜನಿಕ ಹಿತಾಸಕ್ತಿಯ ಕಡ್ಡಾಯ ವರ್ಗಾವಣೆಯಿಂದ ವಿನಾಯಿತಿ ಬಯಸುವ ಬೋಧಕರಿಂದ ಮನವಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಸೂಚಿಸಲಾಗಿತ್ತು. ನಿಗದಿತ ಕೊನೆಯ ದಿನಾಂಕದೊಳಗೆ ಸ್ವೀಕೃತವಾದ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಯ ಅರ್ಜಿ ಹಾಗೂ ಕಡ್ಡಾಯ ವರ್ಗಾವಣೆಯಿಂದ ವಿನಾಯಿತಿ ಕೋರಲಾದ ಮನವಿಗಳನ್ನು ನಿಯಮಾನುಸಾರ ಪರಿಶೀಲಿಸಿ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಕಡ್ಡಾಯ ವರ್ಗಾವಣೆಗೆ ಒಳಪಡುವ ಬೋಧಕರ ವಲಯವಾರು ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ಉಲ್ಲೇಖ (3) ರಂತೆ ಪ್ರಕಟಿಸಿ ಆನ್‌ಲೈನ್ ಮೂಲಕ ಆಕ್ಷೇಪಣೆಗಳನ್ನು ಸಲ್ಲಿಸಲು ಸೂಚಿಸಲಾಗಿತ್ತು.

ನಿಗದಿತ ಕೊನೆಯ ದಿನಾಂಕದೊಳಗೆ ಆನ್‌ಲೈನ್ ಮೂಲಕ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡುವ ಬೋಧಕರ ಅಂತಿಮ ಆದ್ಯತಾ ಪಟ್ಟಿ ಹಾಗೂ ವಿಶೇಷ ಪ್ರಕರಣಗಳಡಿ ಕೋರಿಕೆ ವರ್ಗಾವಣೆಗೆ ಅರ್ಹರಿರುವ

ಬೋಧಕರ ಅಂತಿಮ ಆದ್ಯತಾ ಪಟ್ಟಿಗಳನ್ನು ಈ ಸುತ್ತೋಲೆಗೆ ಕೆಳಕಂಡಂತೆ ಅನುಬಂಧಿಸಲಾಗಿದೆ.

| | |
|---|---|
| ಅನುಬಂಧ 1 a : | ವಿಶೇಷ ಪ್ರಕರಣಗಳ ವರ್ಗಾವಣೆ ಕೌನ್ಸಿಲಿಂಗ್‌ನ ಆದ್ಯತಾ ಪಟ್ಟಿ |
| ಅನುಬಂದ 1 b : | ಸಾರ್ವಜನಿಕ ಹಿತಾಸಕ್ತಿ ವರ್ಗಾವಣೆಗೆ ಒಳಪಡುವ ಬೋಧಕರ ಕೌನ್ಸಿಲಿಂಗ್‌ನ ಆದ್ಯತಾಪಟ್ಟಿ |
| ಅನುಬಂಧ 1 c : | ವಿಶೇಷ ಪ್ರಕರಣಗಳ  ವರ್ಗಾವಣೆಯ ಕಾಯ್ದಿರಿಸಿದ ಬೋಧಕರ ಆದ್ಯತಾ ಪಟ್ಟಿ. |
| ಅನುಬಂಧ 2 : | ಕೌನ್ಸಿಲಿಂಗ್‌ನಲ್ಲಿ ಆಯ್ಕೆಗೆ ಲಭ್ಯಗೊಳಿಸುವ ಖಾಲಿಹುದ್ದೆಗಳ ವಿವರ |
| ಅನುಬಂಧ 3 : | Online Counselling  ವೇಳಾಪಟ್ಟಿ - **DCE ವೆಬ್‌ಸೈಟ್‌ನಲ್ಲಿ ವಿವರಿಸಿದಂತೆ** |

- 05 ವರ್ಷಗಳ ಸೇವಾವಧಿ  ಪೂರೈಸಿದ್ದು ವಿಶೇಷ ಪ್ರಕರಣಗಳಡಿ  ಸಾರ್ವಜನಿಕ ಹಿತಾಸಕ್ತಿಯ ಕಡ್ಡಾಯ ವರ್ಗಾವಣೆಯಿಂದ  ವಿನಾಯಿತಿ ಕೋರಿರುವುದನ್ನು  ಪರಿಗಣಿಸಿರುವುದಿಲ್ಲ.
- ಬೋಧಕರ ಅಂತಿಮ  ಜೇಷ್ಠತಾಪಟ್ಟಿಯನ್ನು ಪ್ರಕಟಿಸುವ ಪ್ರಕ್ರಿಯೆ ಪೂರ್ಣಗೊಳ್ಳದೇ ಇರುವುದರಿಂದ ಏಪ್ರಿಲ್-2022 ಮತ್ತು ಡಿಸೆಂಬರ್-2022 ರ ವರ್ಗಾವಣೆಗೆ ಪರಿಗಣಿಸಲಾದ ಬೋಧಕರ  ಸೇವಾಜೇಷ್ಠತೆ ವಿವರಗಳನ್ನು ಜುಲೈ-2023ರ ವರ್ಗಾವಣೆಗೆ ಪರಿಗಣಿಸಲಾಗಿದೆ.
- ಸಾರ್ವಜನಿಕ ಹಿತಾಸಕ್ತಿಯ ಕಡ್ಡಾಯ ವರ್ಗಾವಣೆಯ ಆದ್ಯತಾ ಪಟ್ಟಿಯಲ್ಲಿ ಇಲ್ಲದೇ ಒಂದೇ ಸ್ಥಳ/ ಒಂದೇ ತಾಲ್ಲೂಕಿನಲ್ಲಿ ದಂಪತಿಗಳು ಕರ್ತವ್ಯನಿರ್ವಹಿಸುತ್ತಿದ್ದು,  ಪತಿ-ಪತ್ನಿ ಪ್ರಕರಣದಲ್ಲಿ ವರ್ಗಾವಣೆಗೆ ಅರ್ಜಿ ಸಲ್ಲಿಸಿರುವುದನ್ನು ಪರಿಗಣಿಸಿರುವುದಿಲ್ಲ.
- Serious Ailments ಪ್ರಕರಣದಲ್ಲಿ ಪತಿ/ಪತ್ನಿ/ಮಕ್ಕಳ ಗಂಭೀರ ಖಾಯಿಲೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರ ಸಲ್ಲಿಸಿರುವ ಮತ್ತು ರಾಜ್ಯ  ವೈದ್ಯಕೀಯ ಮಂಡಳಿಯಿಂದ ಶಿಫಾರಸ್ಸು ಮಾಡಿರುವ ಹಾಗೂ ನಿಗದಿತ ಕನಿಷ್ಟ ಸೇವಾವಧಿ ಪೂರೈಸಿರುವ ಪ್ರಕರಣಗಳನ್ನು  ಪರಿಗಣಿಸಲಾಗಿದೆ. ಅವಲಂಭಿತರ (ತಂದೆ/ತಾಯಿ/ಇತರೆ) ವೈದ್ಯಕೀಯ ಪ್ರಮಾಣಪತ್ರ ಸಲ್ಲಿಸಿರುವ ಪ್ರಕರಣಗಳನ್ನು ಪರಿಗಣಿಸಿರುವುದಿಲ್ಲ.

ವರ್ಗಾವಣೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ದಿನಾಂಕ:28.07.2023ರಿಂದ ಆನ್‌ಲೈನ್ ಮೂಲಕ ನಡೆಸಲು ಉದ್ದೇಶಿಸಿದ್ದು ವಿವರವಾದ ವೇಳಾಪಟ್ಟಿಯನ್ನು ಇಲಾಖಾ ವೆಬ್‌ಸೈಟ್‌ನ ಬೋಧಕರ ವರ್ಗಾವಣೆ – 2023  Web page ನಲ್ಲಿ ಪ್ರಕಟಿಸಲಾಗುವುದು. ಸಂಬಂಧಿಸಿದವರು ಇಲಾಖಾ ವೆಬ್ ಸೈಟ್ ಅನ್ನು ಗಮನಿಸುವುದು.

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ**

**ಇವರಿಗೆ**

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

2. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.

**ಪ್ರತಿ- ಮಾಹಿತಿಗಾಗಿ**

1. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು ಉನ್ನತ ಶಿಕ್ಷಣ ಇಲಾಖೆ ಬೆಂಗಳೂರು
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ ಬೆಂಗಳೂರು, ಮೈಸೂರು, ಶಿವಮೊಗ್ಗ , ಮಂಗಳೂರು, ಧಾರವಾಡ ಹಾಗೂ ಕಲಬುರಗಿ.
3. ಕಛೇರಿ ಪ್ರತಿ.